# ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು ಮತ್ತು ಭಾರತೀಯ ಹವಾಮಾನ ಇಲಾಖೆ

ಗ್ರಾಮೀಣ ಕೃಷಿ ಹವಾಮಾನ ಸೇವಾ
ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)
ನಾಗನಹಳ್ಳಿ, ಮೈಸೂರು 570 003

ದಿನಾಂಕ: 30-01-2024

## ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಕೊಡಗು ಜಿಲ್ಲೆಯ ಹವಾಮಾನ ಮತ್ತು ಕೃಷಿಕಾರ್ಯಕ್ರಮಗಳ ವರದಿ ಪತ್ರಿಕೆ

**ಹವಾಮಾನದ ಮುನ್ಸೂಚನೆ (31–01–2024 ರಿಂದ 04–02–2024)**

| Parameters | 31.01.2024 | 01.02.2024 | 02.02.2024 | 03.02.2024 | 04.02.2024 |
|---|---|---|---|---|---|
| ಮಳೆ (ಮಿ.ಮೀ) | 0 | 0 | 0 | 0 | 0 |
| ಗರಿಷ್ಠ ಉಷ್ಣಾಂಶ ($^0$ಸೆ) | 29 | 29 | 29 | 29 | 29 |
| ಕನಿಷ್ಠ ಉಷ್ಣಾಂಶ ($^0$ಸೆ) | 15 | 16 | 17 | 17 | 17 |
| ಮೋಡ (ಆಕ್ಟ್ಯಾಸ್) | 2 | 2 | 2 | 2 | 1 |
| ಗರಿಷ್ಠ ಗಾಳಿಯ ತೇವಾಂಶ (%) | 99 | 99 | 99 | 99 | 99 |
| ಕನಿಷ್ಠ ಗಾಳಿಯ ತೇವಾಂಶ (%) | 37 | 37 | 37 | 36 | 35 |
| ಗಾಳಿಯ ವೇಗ (ಕಿ.ಮೀ/ ಗಂಟೆ) | 8 | 8 | 8 | 8 | 8 |
| ಗಾಳಿಯ ದಿಕ್ಕು( ಡಿಗ್ರಿ) | 124 | 248 | 135 | 195 | 191 |

**ಮುನ್ಸೂಚನೆಯ ಸಾರಾಂಶ**

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಈ ವಾರದ ಮುನ್ಸೂಚನೆ ಕೊಡಗು ಜಿಲ್ಲೆಯಲ್ಲಿ ದಿನಾಂಕ: 31–01–2024 ರಿಂದ 04–02–2024 ವರೆಗೆ ಮೋಡ ಕವಿದ ವಾತಾವರಣವಿದ್ದು, ಮಳೆ ಬರುವ ಸಂಭವವಿಲ್ಲ. ಗರಿಷ್ಠ ಉಷ್ಣಾಂಶ 29°C. ಮತ್ತು ಕನಿಷ್ಠ ಉಷ್ಣಾಂಶ 15–17°C ವರೆಗೆ ದಾಖಲಾಗುವ ಸಾಧ್ಯತೆಯಿದೆ. ಬೆಳಗಿನ ಗಾಳಿಯ ತೇವಾಂಶ ಶೇಕಡ 99% ವರೆಗೆ ಮತ್ತು ಮಧ್ಯಾಹ್ನದ ತೇವಾಂಶ ಶೇಕಡ 35–37% ವರೆಗೆ ಮತ್ತು ಗಾಳಿಯು ಗಂಟೆಗೆ 8 ಕಿಲೋಮೀಟರ್ ವೇಗದಲ್ಲಿ ಬೀಸುವ ಸಾಧ್ಯತೆಯಿದೆ.

**ಕೃಷಿ ಚಟುವಟಿಕೆಗಳ ಬಗ್ಗೆ ಅನುಸರಿಸಬಹುದಾದ ವಿವರ:**

| ಬೆಳೆ/ ಜಾನುವಾರಗಳು | ರೋಗ ಮತ್ತು ಕೀಟ | ಹಾನಿ ಲಕ್ಷಣಗಳು | ಕೃಷಿ ಸಲಹೆಗಳು |
|---|---|---|---|
| • ಕಟಾವು ಮಾಡಿದದವಸ ಧಾನ್ಯಗಳನ್ನು ಚೆನ್ನಾಗಿ ಒಣಗಿಸಿ ಹೆಚ್ಚು ದಿನ ಕೆಡದಂತೆ ಇಡಲು ಏಕದಳ ಧಾನ್ಯಗಳ ತೇವಾಂಶ ಶೇಕಡ 11 ರಿಂದ 12ರಷ್ಟು, ದ್ವಿದಳ ಧಾನ್ಯಗಳ ತೇವಾಂಶ ಶೇಕಡ 9 ರಷ್ಟು, ಎಣ್ಣೆಕಾಳುಗಳ ತೇವಾಂಶ ಶೇಕಡ 8 ರಷ್ಟು ಮತ್ತುತರಕಾರಿ ಬೀಜಗಳ ತೇವಾಂಶ ಶೇಕಡ 5 ರಿಂದ 6 ರಷ್ಟು ಇರಬೇಕು. | | | |
| ಮಾವು | ಬೂದಿರೋಗ ಹಾಗೂ ಜಿಗಿಹುಳು (ಜಾಸಿಡ್ಸ್) | • ವಾತಾವರಣದಲ್ಲಿ ಬೆಳಗಿನ ಸಮಯದಲ್ಲಿ ಕಡಿಮೆ ಉಷ್ಣಾಂಶ ಮತ್ತು ಹೆಚ್ಚಿನ ಆರ್ದ್ರತೆ ಇರುವುದರಿಂದ ಹೂ ಬಿಡುವ ಹಂತದಲ್ಲಿ ಬೂದಿರೋಗದ ಹಾಗೂ ಜಿಗಿಹುಳು ಬಾಧೆ ಕಂಡು ಬರುತ್ತದೆ. ಬೂದಿರೋಗದ ನಿಯಂತ್ರಣಕ್ಕಾಗಿ ಹೂ ಬಿಡುವ ಮತ್ತು ಕಾಯಿ ಕಚ್ಚಿದ ಹಂತದಲ್ಲಿ ಲೀ. ನೀರಿಗೆ 3.0 ಗ್ರಾಂ. ನೀರಿನಲ್ಲಿ ಕರಗುವ ಗಂಧಕದ ಪುಡಿ ಅಥವಾ 1.0 ಮಿಲೀ. ಹೆಕ್ಸಾಕೋನೋಜೋಲ್ 5 ಇಸಿ. ಔಷದವನ್ನು ಬೆರಸಿ ಸಿಂಪಡಿಸಬೇಕು.<br>• ಜಿಗಿ ಹುಳು ಕೀಟದ ನಿಯಂತ್ರಣಕ್ಕೆ ಹೂವು ಬಿಡುವ ಮುಂಚೆ ಮತ್ತು ಕಾಯಿಗಳು ಬಟಾಣಿ ಕಾಳಿನ ಗಾತ್ರದಲ್ಲಿದ್ದಾಗ ಲೀ. ನೀರಿಗೆ 0.3 ಮಿಲೀ ಇಮಿಡಾಕ್ಲೋಪ್ರಿಡ್ 17.8 ಎಸ್.ಎಲ್. | |

| | | |
|---|---|---|
| | | ಬೆರೆಸಿ ಸಿಂಪಡಿಸುವುದು. |
| ತೆಂಗು | ರುಗೋಸ್ ಬಿಳಿ ನೊಣ | ಬಿಳಿ ನೊಣಗಳು ಎಲೆಗಳ ಕೆಳಭಾಗದಲ್ಲಿ ರಸವನ್ನು ಹೀರುತ್ತವೆ. ಹೆಚ್ಚು ರಸಹೀರುವುದರಿಂದ ಸಿಹಿಯಾದದ್ರವ್ಯವನ್ನು ಹೊರಹಾಕುತ್ತದೆ, ಇದು ಕಪ್ಪು ಶಿಲೀಂಧ್ರದ (ಕ್ಯಾಪ್ನೋಡಿಯಮ್) ಬೆಳವಣಿಗೆಯನ್ನು ಉತ್ತೇಜಿಸುತ್ತದೆ. ಇದು ಸಸ್ಯದ ದ್ಯುತಿಸಂಶ್ಲೇಷಕ ಮೇಲೆ ಪರಿಣಾಮ ಬೀರುತ್ತದೆ. 2.5% ಮೈದಾ ಪೇಸ್ಟ್ ದ್ರಾವಣವನ್ನು ಡಿಟರ್ಜೆಂಟ್/ಖಾದಿ ಸೋಪ್ @ 5 ಗ್ರಾಂ/ಲೀ ನೊಂದಿಗೆ ಬೆರೆಸಿ ಸಿಂಪಡಿಸುವ ಮೂಲಕ ಎಲೆಯ ಮೇಲ್ಮೈಯಲ್ಲಿ ಕಪ್ಪು ಶಿಲೀಂಧ್ರದ(ಕ್ಯಾಪ್ನೋಡಿಯಮ್) ಬೆಳವಣಿಗೆಯನ್ನು ಹೊರಹಾಕಬಹುದು.<br>ಹೆಚ್ಚು ಹಾನಿಯಾದಲ್ಲಿ, ಬೇವಿನ ಎಣ್ಣೆ 0.5% ಅಥವಾ NSKE 5% ಅನ್ನು ಮಾತ್ರ ಸಿಂಪಡಿಸಿ ಮತ್ತು ಯಾವುದೇ ರೀತಿಯ ಕೀಟನಾಶಕಗಳನ್ನು ಸಿಂಪಡಿಸುವುದು ಸೂಕ್ತವಲ್ಲ. |

- ಬೆಳಗಿನ ಜಾವ ಹಾಗೂ ರಾತ್ರಿ ವೇಳೆ ಉಷ್ಣಾಂಶದಲ್ಲಿ ಸ್ವಲ್ಪ ಇಳಿತವಿರುವುದರಿಂದ ಜಾನುವಾರು, ರೇಷ್ಮೆ ಹಾಗೂ ಕೋಳಿ ಸಾಕಣೆ ಕೊಠಡಿಯ ಉಷ್ಣಾಂಶದ ಸ್ಥಿರತೆಯನ್ನು ವಿದ್ಯುತ್ ಬಲ್ಬ್ ಅನ್ನು ಒದಗಿಸುವ ಮೂಲಕ ಕಾಪಾಡಿಕೊಳ್ಳುವುದು.
- ಎರೆಹುಳು ಸಾಕಾಣಿಕ ಘಟಕದಲ್ಲಿ ಹೆಚ್ಚಿನ ತೇವಾಂಶ ಇರದಂತೆ ಎಚ್ಚರಿಕೆ ವಹಿಸಬೇಕು. ಎರೆಕುಣಿಗಳಲ್ಲಿ ಎರೆಗೊಬ್ಬರ ಉತ್ಪಾದನೆಯಾಗುವವರೆಗೆ ಶೇ. 60–70 ರಷ್ಟು ತೇವಾಂಶ ಇರುವ ಹಾಗೆ ನೋಡಿಕೊಳ್ಳಬೇಕು.

- ರೈತರು **"ದಾಮಿನಿ"** ಎಂಬ ತಂತ್ರಾಂಶವನ್ನು ಗೂಗಲ್ ಪ್ಲೇ ಸ್ಟೋರ್‌ನಿಂದ ಡೌನ್ ಲೋಡ್ ಮಾಡಿಕೊಂಡರೆ ಇದರಿಂದ ಮಿಂಚಿನ ಮನ್ಸೂಚನೆಯನ್ನು ಅತ್ಯಂತ ನಿಖರವಾಗಿ ತಿಳಿಯಬಹುದು.
- ಹಾಗೆಯೇ "ಮೌಸಮ್" ಮತ್ತು"ಮೇಘದೂತ್" ತಂತ್ರಾಂಶಗಳಿಂದ ಮಳೆಯ ಮುನ್ಸೂಚನೆ ಮತ್ತು ಕೃಷಿ ಸಲಹೆಗಳನ್ನು ಪಡೆಯಲು ಸೂಚಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ರೈತರು ದೂರವಾಣಿ ಮೂಲಕ ಡಾ॥. ಸಿ. ರಾಮಚಂದ್ರ, ಹಿರಿಯ ಕ್ಷೇತ್ರ ಅಧೀಕ್ಷಕರು/ ಡಾ. ಸುಮಂತ್ ಕುಮಾರ್, ಜಿ. ವಿ, ಸಹ ಸಂಶೋಧಕರು, ದೂರವಾಣಿ ಸಂಖ್ಯೆ. 08212591267/ 9535345814 ರವರನ್ನು ಸಂಪರ್ಕಿಸಬಹುದು.

ಕೃಷಿ ಹವಾಮಾನ ಕ್ಷೇತ್ರ ವಿಭಾಗ,
ನಾಗನಹಳ್ಳಿ, ಮೈಸೂರು